ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಪರಿಸರ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 3/6/2020

# ಆನೆ ಮಾವುತರಿಗೆ ಅರಣ್ಯ ರಕ್ಷಕರ ಸಮಾನ ವೇತನ ನಿಗದಿಗೊಳಿಸಿದ ಸರ್ಕಾರ

ಉ-ವಾ 3/6/20

ಬೆಂಗಳೂರು: ಆನೆ ಮಾವುತರ ವೇತನವನ್ನು ಅರಣ್ಯ ರಕ್ಷಕರ ವೇತನಕ್ಕೆ ಸರಿಸಮನಾಗಿ ನಿಗದಿಪಡಿಸುವಂತೆ ಹಲವು ವರ್ಷಗಳ ಬೇಡಿಕೆಯನ್ನು ಸರ್ಕಾರ ಈಡೇರಿಸಿದೆ.

ಅರಣ್ಯ, ಪರಿಸರ, ಜೀವಿಶಾಸ್ತ್ರ ಇಲಾಖೆಯ ಪರಿಶೀಲನಾ ಸಭೆ ನಡೆಸಿದ ಸಿಎಂ ಯಡಿಯೂರಪ್ಪ ಮಾವುತರಿಗೆ ಕೌಶಲ್ಯ ಕೆಲಸಗಾರರೆಂದು ಪರಿಗಣಿಸಿ ಅವರಿಗೆ ಅರಣ್ಯ ರಕ್ಷಕರ ವೇತನ ನೀಡಲು ಒಪ್ಪಿಗೆ ಸೂಚಿಸಿದ್ದಾರೆ. ವನ್ಯಜೀವಿಗಳ ದಾಳಿಯಿಂದ ಮರಣ ಹೊಂದುವವರಿಗೆ ನೀಡುವ ಪರಿಹಾರ ಧನದ ಮೊತ್ತವನ್ನು 7.50 ಲಕ್ಷ ರೂ.ಗಳಿಂದ 10 ಲಕ್ಷ ರೂ.ಗಳಿಗೆ ಹೆಚ್ಚಿಸಲು , ಅರಣ್ಯ ಇಲಾಖೆಯ ಗಾರ್ಡ್‌ಗಳನ್ನು ಖಾಯಂ ಗೊಳಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ ಆರ್ಥಿಕ ನಷ್ಟದಲ್ಲಿರುವುದರಿಂದ ಗೇರು ಅಭಿವೃದ್ಧಿ ಪ್ರಾಧಿಕಾರ, ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ, ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮಗಳನ್ನು ವಿಲೀನಗೊಳಿಸುವ ಬಗ್ಗೆ ಚರ್ಚಿಸಲಾಯಿತು. ಇದರ ಸಾಧಕ ಬಾಧಕಗಳನ್ನು ಪರಿಶೀಲಿಸಿ ನಿರ್ಧಾರಕ್ಕೆ ಬರಲು ತೀರ್ಮಾನಿಸಲಾಯಿತು. ಹಸಿರು ನ್ಯಾಯಾಧಿಕರಣದ ನಿರ್ದೇಶನಗಳ ಅನುಸಾರ 17 ಕಲುಷಿತ ನದಿ ಭಾಗಗಳ ಪುನಶ್ಚೇತನ ಕಾರ್ಯ ಪ್ರಗತಿಯಲ್ಲಿದೆ. ನಗರಗಳಲ್ಲಿ ವಾಯು ಗುಣಮಟ್ಟ ಪುನಶ್ಚೇತನಕ್ಕೆ ಕ್ರಮಕೈಗೊಂಡಿದ್ದು ತೀವ್ರ ಕಲುಷಿತವೆಂದು ಗುರುತಿಸಲ್ಪಟ್ಟಿರುವ ಜಿಗಣಿ- ಬೊಮ್ಮನಹಳ್ಳಿ ಕೈಗಾರಿಕಾ ಪ್ರದೇಶ ಅಭಿವೃದ್ಧಿಗೆ ಕ್ರಮ ವಹಿಸಲಾಗಿದೆ. ಬೆಂಗಳೂರಿನ ಘನ ತ್ಯಾಜ್ಯ ವೈಜ್ಞಾನಿಕ ವಿಲೇವಾರಿ ಕ್ರಮಗಳ ಬಗ್ಗೆ ಎನ್‌ಜಿಟಿ ನಿರ್ದೇಶಿಸಿದ್ದು ಈ ಸಂಬಂಧ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಸಭೆಗೆ ಅಧಿಕಾರಿಗಳು ತಿಳಿಸಿದರು. ಸಚಿವ ಆನಂದ ಸಿಂಗ್ ಇತರರಿದ್ದರು.